# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| 1 | ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | 2846 |
| 2 | ಸದಸ್ಯರ ಹೆಸರು | ಶ್ರೀ ಸುನೀಲ್ ವಲ್ಯಾಪುರ್<br>(ವಿಧಾನಸಭೆಯಿಂದ ಚುನಾಯಿತರಾದವರು) |
| 3 | ಉತ್ತರಿಸಬೇಕಾದ ದಿನಾಂಕ | 30.03.2022 |
| 4 | ಉತ್ತರಿಸುವ ಸಚಿವರು | ಕಂದಾಯ ಸಚಿವರು |

| ಕ್ರ ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ಮೋಜಿಣಿ ಇಲಾಖೆಯಡಿ ಪೋಡಿ, ಹದ್ದುಬಸ್ತು, ಇ-ಸ್ವತ್ತು ಮುಂತಾದ ಅರ್ಜಿಗಳು ವರ್ಷಾನುಗಟ್ಟಲೇ ವಿಲವಾರಿಯಾಗದೆ ವಿಳಂಬವಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | **ಸಾರ್ವಜನಿಕರ ಅಳತೆ ಅರ್ಜಿಗಳ ತ್ವರಿತ ವಿಲೇವಾರಿಗೆ ಸರ್ಕಾರ ಕೈಗೊಂಡ ಕ್ರಮಗಳು:-**<br>1) ಭೂಮಾಪನ ಇಲಾಖೆಯಲ್ಲಿ ಮೋಜಿಣಿ ತಂತ್ರಾಂಶದ ಮುಖಾಂತರ ಅರ್ಜಿಗಳ ಸ್ವೀಕೃತಿ, ಅರ್ಜಿಗಳ ಹಂಚಿಕೆ, ಅಳತೆ ಮಾಡಿ ಅಪ್‌ಲೋಡ್ ಮಾಡುವುದು, ಕಡತಗಳ ಪರಿಶೀಲನೆ ಮೊದಲಾದ ಎಲ್ಲಾ ಅಳತೆ ಪ್ರಕ್ರಿಯೆಗಳನ್ನು ಪ್ರತಿ ಹಂತದಲ್ಲಿಯೂ FIFO (ಸರದಿ ಸಾಲಿನಂತೆ) ಆನ್‌ಲೈನ್ ಮೂಲಕ ನಿರ್ವಹಿಸಲಾಗುತ್ತಿದೆ.<br>2) ನಿಯಮಿತವಾಗಿ ಕಂದಾಯ ಇಲಾಖೆಯಿಂದ ಪಹಣಿ ತಿದ್ದುಪಡಿ ಕುರಿತು ಕಂದಾಯ ಅದಾಲತ್‌ಗಳನ್ನು ನಡೆಸಲಾಗುತ್ತಿದೆ.<br>3) ನಮೂನೆ 1 ರಿಂದ 5 ಅನ್ನು ಭರ್ತಿ ಮಾಡಲು ಅಗತ್ಯ ಸೂಚನೆ ಮತ್ತು ಮಾರ್ಗಸೂಚಿಗಳನ್ನು ನೀಡಲಾಗಿದೆ.<br>4) ಕಾಲಕಾಲಕ್ಕೆ ವಿಡಿಯೋ ಸಂವಾದ ಮತ್ತು ವಿಭಾಗವಾರು ಅಧಿಕಾರಿಗಳ ಸಭೆ ನಡೆಸಿ ಪ್ರಗತಿ ಪರಿಶೀಲನೆ ಮಾಡಿ ಹೆಚ್ಚಿನ ಪ್ರಗತಿ ಸಾಧಿಸಲು ಸೂಕ್ತ ಮಾರ್ಗದರ್ಶನ ಮತ್ತು ಅಗತ್ಯ ಸೂಚನೆ ನೀಡಲಾಗುತ್ತಿದೆ.<br>5) ಹೆಚ್ಚಿನ ಪ್ರಕರಣಗಳು ಬಾಕಿ ಇರುವ ತಾಲ್ಲೂಕುಗಳಿಗೆ ಕಡಿಮೆ ಪ್ರಕರಣಗಳು ಬಾಕಿ ಇರುವ ತಾಲ್ಲೂಕಿನಿಂದ ಭೂಮಾಪಕ ರನ್ನು ನಿಯೋಜನೆ ಮಾಡಿ ಪ್ರಕರಣಗಳನ್ನು ವಿಲೇಗೊಳಿಸಲು ಕ್ರಮ ಕೈಗೊಳ್ಳಲಾಗುತ್ತಿದೆ.<br>6) 2072 ಪರವಾನಗಿ ಭೂಮಾಪಕರ ಆಯ್ಕೆ ಕುರಿತು ಅರ್ಜಿಗಳನ್ನು ಆಹ್ವಾನಿಸಿ, ದಿನಾಂಕ 01-02-2021 ಮತ್ತು 02-02-2021 ರಂದು ಸ್ಪರ್ಧಾತ್ಮಕ ಪರೀಕ್ಷೆಯನ್ನು ನಡೆಸಿ, ಜಿಲ್ಲಾವಾರು ಅರ್ಹ ಅಭ್ಯರ್ಥಿಗಳನ್ನು ಆಯ್ಕೆ ಮಾಡಿ ತರಬೇತಿ ನಂತರ ಉತ್ತೀರ್ಣವಾದ 841 ಜನರಿಗೆ ಪರವಾನಗಿ ನೀಡಿ ರಾಜ್ಯದ ವಿವಿಧ ತಾಲ್ಲೂಕುಗಳಿಗೆ ನಿಯೋಜಿಸಿದ್ದು, ನಿಯೋಜಿತ ತಾಲ್ಲೂಕುಗಳಲ್ಲಿ ಕಾರ್ಯ ನಿರ್ವಹಿಸು ತ್ತಿದ್ದಾರೆ. ಇಲಾಖಾ ತರಬೇತಿ ಪೂರ್ಣ ಗೊಳಿಸಿರುವ 438 ಜನ ಪರವಾನಗಿ ಭೂಮಾಪಕರಿಗೆ ವಿವಿಧ ತಾಲ್ಲೂಕುಗಳಿಗೆ |
| ಆ) | ಹಾಗಿದ್ದಲ್ಲಿ, ಈ ವಿಳಂಬಕ್ಕೆ ಕಾರಣವಾದ ಸಿಬ್ಬಂದಿ ಕೊರತೆ ಮತ್ತು ತಾಂತ್ರಿಕ ದೋಷದಂತಹ ಸಮಸ್ಯೆಗಳನ್ನು ಪರಿಹರಿಸಲು ಸರ್ಕಾರ ಯಾವ ಕ್ರಮ ಕೈಗೊಂಡಿದೆ; (ಮಾಹಿತಿ ನೀಡುವುದು) | |

| | | |
|---|---|---|
| | | ಕೌನ್ಸಿಲಿಂಗ್ ಮೂಲಕ ಸ್ಥಳ ನಿಯೋಜನೆ ಮಾಡಲಾಗಿದೆ. ಪ್ರಸ್ತುತ 508 ಪರವಾನಗಿ ಭೂಮಾಪಕರು ತರಬೇತಿ ಪಡೆಯುತ್ತಿದ್ದು, ತರಬೇತಿ ನಂತರ ಉತ್ತೀರ್ಣರಾದವರಿಗೆ ಪರವಾನಗಿ ನೀಡಿ ರಾಜ್ಯದ ವಿವಿಧ ತಾಲ್ಲೂಕುಗಳಿಗೆ ಕಾರ್ಯ ನಿಯೋಜಿಸಲಾಗುತ್ತಿದೆ.<br>7) ಅಗತ್ಯತೆಗನುಗುಣವಾಗಿ ಹೊಸದಾಗಿ 3000 ಪರವಾನಗಿ ಭೂಮಾಪಕರನ್ನು ಆಯ್ಕೆ ಮಾಡಿಕೊಳ್ಳಲು ದಿನಾಂಕ 28-12-2021 ರಂದು ಅರ್ಜಿಗಳನ್ನು ಆಹ್ವಾನಿಸಲಾಗಿದ್ದು, ಪ್ರವೇಶ ಪರೀಕ್ಷೆ ನಡೆಸಿ ಜಿಲ್ಲಾವಾರು ಅರ್ಹ ಅಭ್ಯರ್ಥಿಗಳನ್ನು ಆಯ್ಕೆ ಮಾಡಿ, ತರಬೇತಿ ನಂತರ ಉತ್ತೀರ್ಣರಾದವರಿಗೆ ಪರವಾನಗಿ ನೀಡಿ ರಾಜ್ಯದ ವಿವಿಧ ತಾಲ್ಲೂಕುಗಳಿಗೆ ಕಾರ್ಯ ನಿಯೋಜಿಸಲಾಗುತ್ತಿದೆ.<br>8) ಕಾನೂನಿಗೆ ಅಗತ್ಯ ತಿದ್ದುಪಡಿ ತಂದು ಪರವಾನಗಿ ಭೂಮಾಪಕರು ಸಹಾ ಹದ್ದುಬಸ್ತು ಅಳತೆ ಕಾರ್ಯ ನಿರ್ವಹಿಸಲು ಅವಕಾಶ ಕಲ್ಪಿಸಲಾಗಿದ್ದು ಇದರಿಂದ ಸರ್ಕಾರಿ ಭೂಮಾಪಕರ ಕಾರ್ಯ ಒತ್ತಡ ಕಡಿಮೆಯಾಗುವುದರಿಂದ ಇತರೆ ಅರ್ಜಿಗಳ ವಿಲೇವಾರಿ ಮಾಡಲು ಸಾಧ್ಯವಾಗುತ್ತಿದೆ. |
| ಇ) | ರಾಜ್ಯದಲ್ಲಿ ಉಪನೋಂದಣಿ ಕಛೇರಿಗಳ ಮೇಲೆ ತುಂಬಾ- ಒತ್ತಡಗಳಿದ್ದು, ಸಾರ್ವಜನಿಕರಿಗೆ ತೊಂದರೆಯಾಗಿ ರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ ನೂತನ ವಾಗಿ ರಚನೆಯಾಗಿರುವ ಎಲ್ಲಾ ಹೊಸ ತಾಲ್ಲೂಕುಗಳಲ್ಲಿ ಉಪನೋಂದಣಾಧಿ ಕಾರಿ ಕಛೇರಿ ಪ್ರಾರಂಭಿಸಲು ಸರ್ಕಾರ ಕ್ರಮಕೈಗೊಳ್ಳುವುದೇ; (ಮಾಹಿತಿ ನೀಡುವುದು) | ನೋಂದಣಿ ಮತ್ತು ಮುದ್ರಾಂಕ ಇಲಾಖೆಯು ನಿಗದಿಪಡಿಸಿರುವ ಮಾನದಂಡಗಳನ್ವಯ ನೋಂದಣಿ ಮಹಾಪರಿವೀಕ್ಷಕರು ಮತ್ತು ಮುದ್ರಾಂಕ ಆಯುಕ್ತರಿಂದ ಪ್ರಸ್ತಾವನೆ ಪಡೆದು, ಆರ್ಥಿಕ ಇಲಾಖೆಯೊಂದಿಗೆ ಸಮಾಲೋಚನೆ ನಡೆಸಿ ಹೊಸ ತಾಲ್ಲೂಕುಗಳಲ್ಲಿ ಉಪನೋಂದಣಿ ಕಛೇರಿಗಳನ್ನು ಪ್ರಾರಂಭಿಸಲು ಕ್ರಮ ಕೈಗೊಳ್ಳಲಾಗುವುದು. |
| ಈ) | ರಾಜ್ಯದಲ್ಲಿರುವ ಪರವಾನಗಿ ಭೂಮಾಪಕರು ಸಂಖ್ಯೆ ಎಷ್ಟು; ಈ ಭೂಮಾಪಕರು ನೇಮಕಕ್ಕೆ ಇರುವ ವಿದ್ಯಾರ್ಹತೆ ಅಥವಾ ಮಾನದಂಡ ವೇನು ಮತ್ತು ಅವರಿಗೆ ನೀಡಲಾಗುವ ಮಾಸಿಕ ವೇತನ ಎಷ್ಟು ಹಾಗೂ ಈ ಭೂಮಾಪಕರು ಕಾರ್ಯ ಮಾಡುವ ಕುರಿತು ಸರ್ಕಾರ ಕ್ರಮ ಕೈಗೊಳ್ಳುವುದೇ? | ಪ್ರಸ್ತುತ ರಾಜ್ಯದಲ್ಲಿ ಒಟ್ಟು 3049 ಪರವಾನಗಿ ಭೂಮಾಪಕರು ಕಾರ್ಯ ನಿರ್ವಹಿಸುತ್ತಿದ್ದಾರೆ. ಕರ್ನಾಟಕ ಭೂಕಂದಾಯ ನಿಯಮಗಳು 1966 ನಿಯಮ 46(ಎ) ರನ್ವಯ ಈ ಕೆಳಕಂಡ ವಿದ್ಯಾರ್ಹತೆಯನ್ನು ನಿಗದಿಪಡಿಸಲಾಗಿದೆ.<br>1. ವೃತ್ತಿ ಶಿಕ್ಷಣ ನಿರ್ದೇಶನಾಲಯದಿಂದ ಭೂಮಿ ಮತ್ತು ನಗರಮಾಪನ ವಿಷಯದಲ್ಲಿ ಜೆ.ಓ.ಸಿ. ತರಬೇತಿ ಪೂರ್ಣಗೊಳಿಸಿರಬೇಕು.<br>2. ತಾಂತ್ರಿಕ ಶಿಕ್ಷಣ ನಿರ್ದೇಶನಾಲಯವು ನೀಡುವ ಸಿವಿಲ್ ಇಂಜಿನಿಯರಿಂಗ್ ಡಿಪ್ಲೋಮಾ ಅಥವಾ ತತ್ಸಮಾನ ವಿದ್ಯಾರ್ಹತೆಯನ್ನು ಹೊಂದಿರಬೇಕು. |

| | | |
|---|---|---|
| | | ಪರವಾನಗಿ ಭೂಮಾಪಕರುಗಳಿಗೆ ಮಾಸಿಕ ವೇತನವನ್ನು ನಿಗದಿಪಡಿಸಿರುವುದಿಲ್ಲ. ಬದಲಿಗೆ ಅವರುಗಳು ಪೂರ್ಣ ಪ್ರಮಾಣದಲ್ಲಿ ಅಪ್ ಲೋಡ್ ಮಾಡಿ ವಿಲೇವಾರಿ ಮಾಡುವ ಪ್ರತಿ ಅರ್ಜಿಗೆ ರೂ.1200/- ಮತ್ತು ಪ್ರತಿ ಹೆಚ್ಚುವರಿ ಬ್ಲಾಕ್ ಗೆ 200/-ರಂತೆ ಸೇವಾ ಶುಲ್ಕವನ್ನು ಪಾವತಿಸಲಾಗುತ್ತಿದೆ.<br><br>ಸರ್ಕಾರದ ಅಧಿಸೂಚನೆ ಸಂಖ್ಯೆ:ಕಂಇ 208 ಭೂದಾಸ 97, ದಿನಾಂಕ:06.07.1999 ರಲ್ಲಿ ಪ್ರೀ ಮ್ಯೂಟೇಶನ್ ಸ್ಕೆಚ್ ತಯಾರಿಸುವ ಸಲುವಾಗಿ ಕರ್ನಾಟಕ ಭೂ ಕಂದಾಯ ಅಧಿನಿಯಮ ಮತ್ತು ಭೂ ಕಂದಾಯ ನಿಯಮಗಳಿಗೆ ತಿದ್ದುಪಡಿ ತಂದು ಪರವಾನಗಿ ಭೂಮಾಪಕರನ್ನು ನೇಮಿಸಿ ಕೊಳ್ಳಲಾಗಿದೆ. ಇವರನ್ನು ಯಾವುದೇ ಖಾಲಿ ಹುದ್ದೆಗೆ ನೇಮಕ ಮಾಡಿಕೊಂಡಿರುವುದಿಲ್ಲ. ಸಂಚಿತ ನಿಧಿಯಿಂದಾಗಲೀ ಅಥವಾ ಸರ್ಕಾರದ ಅನುದಾನದಿಂದಾಗಲಿ ಇವರಿಗೆ ವೇತನ ಪಾವತಿಸಿರುವುದಿಲ್ಲ. ಅರ್ಜಿದಾರರಿಂದ ಸ್ವೀಕೃತ ವಾಗುವ ಶುಲ್ಕದಲ್ಲಿ ಕಾಲಕಾಲಕ್ಕೆ ನಿಗಧಿಪಡಿಸಿದ ಮೊತ್ತವನ್ನು ಪಾವತಿಸಲಾಗುತ್ತಿದೆ. ಅಲ್ಲದೇ, ಪರವಾನಗಿ ನೀಡುವಾಗ ಇದು ಯಾವುದೇ ಸರ್ಕಾರಿ ಸೇವೆಗೆ ಪೂರಕವಲ್ಲವೆಂದು ಸ್ಪಷ್ಟಪಡಿಸಲಾಗಿದೆ. ಅಲ್ಲದೆ ಮಾನ್ಯ ಸರ್ವೋಚ್ಚ ನ್ಯಾಯಾಲಯದ ಶ್ರೀಮತಿ ಉಮಾದೇವಿ ಪ್ರಕರಣದನ್ವಯ ಪರವಾನಗಿ ಭೂಮಾಪಕರನ್ನು ಖಾಯಂ ಆಗಿ ನೇಮಕಾತಿ ಮಾಡಿಕೊಳ್ಳಲು ನಿಯಮಗಳಲ್ಲಿ ಅವಕಾಶ ವಿರುವುದಿಲ್ಲ. ಆದರೆ ಇಲಾಖೆಯ ವೃಂದ ಮತ್ತು ನೇಮಕಾತಿ ನಿಯಮಗಳಲ್ಲಿ ಭೂಮಾಪಕರ ಹುದ್ದೆಯ ನೇರ ನೇಮಕಾತಿಯಲ್ಲಿ ಅವಕಾಶ ಕಲ್ಪಿಸಲಾಗಿದ್ದು, ಇದರಿಂದ ಬಹಳಷ್ಟು ಪರವಾನಗಿ ಭೂಮಾಪಕರುಗಳಿಗೆ ಅನುಕೂಲವಾಗಿರುತ್ತದೆ. |

**ಸಂಖ್ಯೆ: ಕಂಇ 110 ಎಸ್‌ಎಸ್‌ಸಿ 2022**

**(ಆರ್.ಅಶೋಕ)**
ಕಂದಾಯ ಸಚಿವರು